## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೆರೆ ಅಭಿವೃದ್ಧಿಗಾಗಿ ಲೆಕ್ಕಶೀರ್ಷಿಕೆ:4702ರಡಿ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಮಾಗಡಿ ಕೆರೆ ಅಭಿವೃದ್ಧಿಪಡಿಸಲು ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:** ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂ:ಆಇ/109/ವೆಚ್ಚ-6/2017 ದಿನಾಂಕ:18-3-2017

**ಪ್ರಸ್ತಾವನೆ:**

ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಮಾಗಡಿ ಕೆರೆ ಅಭಿವೃದ್ಧಿಗಾಗಿ ರೂ.370.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆರ್ಥಿಕ ಇಲಾಖೆ/109/ವೆಚ್ಚ-6 2017 ದಿನಾಂಕ:27-2-2017ರಲ್ಲಿ, ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಮಾಗಡಿ ಕೆರೆ ಅಭಿವೃದ್ಧಿಗಾಗಿ ರೂ.370.00 ಲಕ್ಷಗಳ ಹೆಚ್ಚುವರಿ ಅನುದಾನ ಒದಗಿಸುವಂತೆ ಕೋರಲಾಗಿದ್ದು, ಆರ್ಥಿಕ ಇಲಾಖೆಯು ಒಪ್ಪಿ ಅಗತ್ಯ ಕ್ರಮ ಕೈಗೊಳ್ಳುವಂತೆ ಇಲಾಖೆಗೆ ತಿಳಿಸಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಕೆರೆ ಅಭಿವೃದ್ಧಿಗಾಗಿ ಲೆಕ್ಕಶೀರ್ಷಿಕೆ:4702ರಡಿ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಮಾಗಡಿ ಕೆರೆ ಅಭಿವೃದ್ಧಿಪಡಿಸಲು ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:91:ಆರ್‌ಆರ್‌ಸಿ::2016, ಬೆಂಗಳೂರು, ದಿನಾಂಕ:28-3-2017**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಲೆಕ್ಕ ಶೀರ್ಷಿಕೆ: 4702ರಡಿ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಮಾಗಡಿ ಕೆರೆಯನ್ನು ರೂ.370.00 ಲಕ್ಷಗಳ (ರೂಪಾಯಿಗಳು ಮೂರುನೂರ ಎಪ್ಪತ್ತು ಲಕ್ಷಗಳು ಮಾತ್ರ) ಮೊತ್ತದಲ್ಲಿ ಅಭಿವೃದ್ಧಿಪಡಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:**

**ಷರತ್ತುಗಳು:**

1. ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಮಾಗಡಿ ಕೆರೆ ನಿರ್ಮಾಣ ಕಾಮಗಾರಿಗಳನ್ನು ತುರ್ತು ಹಾಗೂ ಅಗತ್ಯತೆ ಆಧಾರದ ಮೇರೆಗೆ ಹಂಚಿಕೆ ಮಿತಿಗೊಳಪಟ್ಟು ಕ್ರೆಡಿಲ್ ವಿಭಾಗದಿಂದ ಅನುಷ್ಠಾನಗೊಳಿಸತಕ್ಕದ್ದು.
2. ಮುಖ್ಯ ಇಂಜನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆರವರು ಎಲ್ಲಾ ಅನುಮೋದಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಹಾಗೂ ಕಾರ್ಯಪಾಲಕ ಅಭಿಯಂತರರಿಂದ ಪ್ರಗತಿಯ ವರದಿಯನ್ನು ಪಡೆದು ಸರ್ಕಾರಕ್ಕೆ ಕಾಲಕಾಲಕ್ಕೆ ನೀಡತಕ್ಕದ್ದು
3. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತಿ/ಕೆಆರ್‌ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.
4. ಕರ್ನಾಟಕ ಪಾರದರ್ಶಕತೆ ನಿಯಮ 4 ಜಿ ವಿನಾಯಿತಿ ಇಲ್ಲದಿದ್ದಲ್ಲಿ ಕಾಮಗಾರಿಗಳನ್ನು ಕರ್ನಾಟಕ ಪಾರದರ್ಶಕತೆ ಕಾಯಿದೆ ಪ್ರಕಾರ ಟೆಂಡರ್ ಕರೆದು ನಿರ್ವಹಿಸುವುದು.
5. ಈ ಯೋಜನೆಯಡಿಯ ಎಲ್ಲಾ ಕಾಮಗಾರಿಗಳ ಬಳಕೆಯಾದ ಹಣ ಕುರಿತಂತೆ ಮಾಹಿತಿಯನ್ನು ಸರ್ಕಾರಕ್ಕೆ ಹಾಗೂ ಮುಖ್ಯ ಇಂಜನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಗೆ ನೀಡುವುದು.
6. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು ವೆಬ್‌ಸೈಟ್ ನಲ್ಲಿ ಅಳವಡಿಸತಕ್ಕದ್ದು.

7. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

8. ಕಾಮಗಾರಿಗಳ ಗುಣಮಟ್ಟ ಪರೀಕ್ಷೆಯನ್ನು ಕೆಆರ್ಆರ್‌ಡಿಎ ವತಿಯಿಂದ ನಿಗಧಿಪಡಿಸಿರುವ 3rd Party/sqm/DQM ಗಳಿಂದ ಪರಿವೀಕ್ಷಣೆ ಮಾಡಿಸತಕ್ಕದ್ದು.

9. 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.

11. ಈ ಆದೇಶದಂತೆ ಜಿಲ್ಲಾ ಪಂಚಾಯತಿ/ಕೆಆರ್ಐಡಿಎಲ್ ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ತಾಲ್ಲೂಕುವಾರು ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್,ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂ:ಆಇ/109/ವೆಚ್ಚ-6/2017 ದಿನಾಂಕ:18-3-2017ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯ
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಬೆಂಗಳೂರು
4. ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
9. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ

ಕಟ್ಟಡ, ಬೆಂಗಳೂರು.
11.ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಜಿಲ್ಲಾ ಖಜಾನಾಧಿಕಾರಿಗಳು, ಗದಗ ಜಿಲ್ಲೆ
13.ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14.ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ, ಆರ್ಥಿಕ ಇಲಾಖೆ, ಬೆಂಗಳೂರು.
15. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ
16.ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.-9.
17. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ
18. ಕಾರ್ಯಪಾಲಕ ಅಭಿಯಂತರರು. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ
19.ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.